**<u>ಸಾಕ್ಷಿಗೆ ದಿನಾಂಕಃ 13.01.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.KGB ರವರಿಂದಃ</u>**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು, ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**3** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**4** ಎಂದು, ಮತ್ತು ವಾಹನಗಳನ್ನು ವಶಕ್ಕೆ ಪಡೆದ ಪಂಚನಾಮೆಯನ್ನು ನಿ.ಪಿ.**5** ಎಂದು, ಐಎಂವಿ ವರದಿಯನ್ನು ನಿ.ಪಿ.**6** ಎಂದು ಮತ್ತು ಅಂತಿಮ ವರದಿಯನ್ನು ನಿ.ಪಿ.**7** ಎಂದು ಗುರುತಿಸಿದೆ.

3) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.**8** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು**

ನಿ.ಪಿ.**9** ಎಂದು, ಮತ್ತೊಂದು ಉತ್ತರವನ್ನು ನಿ.ಪಿ.**10** ಎಂದು ಗುರುತಿಸಿದೆ.

4) ಸಿ.ಸಿ **1565/2025** ಪ್ರಕರಣದ ಆದೇಶದ ಹಾಳೆಯನ್ನು ನಿ.ಪಿ.**11** ಎಂದು ಗುರುತಿಸಿದೆ.

**ಸೂಚನೆ:** ನಿ.ಪಿ.1 ರಿಂದ ನಿ.ಪಿ.11 ಎಂದು ಗುರುತು ಆಗಿರುವ ದಾಖಲೆಗಳು ಮತ್ತೊಂದು ಪ್ರಕರಣದಿಂದ ಪಡೆದುಕೊಂಡಿರುವಂತಹ ಯಥಾ ನಕಲುಗಳು ಆಗಿವೆ.

5) **ಎರಡು ಡಿಸ್ಚಾರ್ಜ್ ಸಮ್ಮರಿಗಳನ್ನು** ನಿ.ಪಿ.**12** ಮತ್ತು ನಿ.ಪಿ.**13** ಎಂದು, ಮತ್ತು **Outpatient** ದಾಖಲೆಗಳನ್ನು ನಿ.ಪಿ.**14** ಮತ್ತು ನಿ.ಪಿ.**15** ಎಂದು ಗುರುತಿಸಿದೆ.

6) **Eco Cardiography report** ಅನ್ನು ನಿ.ಪಿ.**16** ಎಂದು, ಮತ್ತು **ECG** ಅನ್ನು ನಿ.ಪಿ.**17** ಎಂದು ಗುರುತಿಸಿದೆ.

7) ಒಟ್ಟು **38** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**18** ಎಂದು ಗುರುತಿಸಿದೆ.

8) ಒಟ್ಟು **7 Prescriptions** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು

ಒಟ್ಟಾಗಿ ನಿ.ಪಿ.**19** ಎಂದು ಗುರುತಿಸಿದೆ.

9) ಎರಡು ಆರ್.ಟಿ.ಸಿ ಗಳನ್ನು ನಿ.ಪಿ.**20** ಮತ್ತು ನಿ.ಪಿ.**21** ಎಂದು ಗುರುತಿಸಿದೆ.

10) ಒಟ್ಟು **9 X-ray** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**22** ಎಂದು ಗುರುತಿಸಿದೆ.

11) ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.